ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ, ರಾಯಚೂರು
ADIKAVI SRI MAHARSHI VALMIKI UNIVERSITY, RAICHUR
ಕೃಷ್ಣ–ತುಂಗಆವರಣ, ಮಂತ್ರಾಲಯರಸ್ತೆ, ರಾಷ್ಟ್ರೀಯ ಹೆದ್ದಾರಿ–167,
ಯರಗೇರಾ–584133, ರಾಯಚೂರು, ಕರ್ನಾಟಕ
ಆಡಳಿತ ವಿಭಾಗ

ಕ್ರ.ಸಂ. ಆಶ್ರೀಮವಾವಿರಾ/ಆಡಳಿತ/ಅಉ/2025–26/ 734

ದಿನಾಂಕ: 04.09.2025

## 2025–26ನೇ ಸಾಲಿಗೆ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

2025–26ನೇ ಶೈಕ್ಷಣಿಕ ಸಾಲಿಗೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಈ ಕೆಳಕಾಣಿಸಿದ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಗತ್ಯತೆಗನುಸಾರವಾಗಿ ಬೋಧನಾ ಕಾರ್ಯದ ನಿರ್ವಹಣೆಗಾಗಿ ಸಂಬಂಧಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿ ಜೊತೆಗೆ ಪಿಎಚ್.ಡಿ./ನೆಟ್/ಕೆ–ಸೆಟ್ ವಿದ್ಯಾರ್ಹತೆಯನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಪೂರ್ಣ ಕಾಲಿಕ/ಅರೆ ಕಾಲಿಕ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಪಡೆಯಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಸ್ನಾತಕೋತ್ತರ ವಿಭಾಗಗಳು | ಅಂದಾಜು | |
|---|---|---|---|
| | | ಪೂರ್ಣಕಾಲಿಕ | ಅರೆಕಾಲಿಕ |
| 01 | ಕನ್ನಡ | 04 | 00 |
| 02 | ಇಂಗ್ಲೀಷ್ | 03 | 01 |
| 03 | ಅರ್ಥಶಾಸ್ತ್ರ | 04 | 00 |
| 04 | ಇತಿಹಾಸ | 03 | 01 |
| 05 | ರಾಜ್ಯಶಾಸ್ತ್ರ | 03 | 00 |
| 06 | ಸಮಾಜಶಾಸ್ತ್ರ | 03 | 00 |
| 07 | ಸಮಾಜ ಕಾರ್ಯ | 04 | 00 |
| 08 | ಮಹಿಳಾ ಅಧ್ಯಯನ | 04 | 00 |
| 09 | ಪತ್ರಿಕೋದ್ಯಮ ಮತ್ತು ಸಮೂಹ ಮಾಧ್ಯಮ | 03 | 00 |
| 10 | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ | 03 | 00 |
| 11 | ರಸಾಯನ ಶಾಸ್ತ್ರ | 03 | 00 |
| 12 | ಗಣಕ ವಿಜ್ಞಾನ | 03 | 02 |
| 13 | ಗಣಿತ | 04 | 00 |
| 14 | ಭೌತಶಾಸ್ತ್ರ | 03 | 01 |
| 15 | ಸಸ್ಯಶಾಸ್ತ್ರ | 03 | 00 |
| 16 | ಪ್ರಾಣಿಶಾಸ್ತ್ರ | 03 | 00 |
| 17 | ಸೂಕ್ಷ್ಮ ಜೀವಶಾಸ್ತ್ರ | 02 | 00 |
| 18 | ಉಪಕರಣಾತ್ಮಕ ತಂತ್ರಜ್ಞಾನ | 00 | 01 |
| 19 | ವಾಣಿಜ್ಯ | 04 | 00 |
| 20 | ಉರ್ದು | 01 | 01 |
| | ಒಟ್ಟು | 60 | 07 |
| | | 67 | |

(*ಮೇಲೆ ತಿಳಿಸಿದ ಅತಿಥಿ ಉಪನ್ಯಾಸಕರ ಕಾರ್ಯಭಾರವು ವಿಭಾಗವಾರು ಹಂಚಿಕೆಯಾಗಿದ್ದು, ಇದರಲ್ಲಿ ಯಾವುದೇ ವ್ಯತ್ಯಾಸಗಳಾದರೆ ವಿಶ್ವವಿದ್ಯಾನಿಲಯವು ಈ ಸಂಖ್ಯೆಯಲ್ಲಿ ಬದಲಾವಣೆಯನ್ನು ಮಾಡುವ ಅಧಿಕಾರ ಹೊಂದಿದೆ. ಇದರಲ್ಲಿ ವಿಶ್ವವಿದ್ಯಾನಿಲಯದ ನಿರ್ಧಾರವೇ ಅಂತಿಮವಾಗಿರುತ್ತದೆ)

4/9

ಕುಲಸಚಿವರು
ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ
ರಾಯಚೂರು.

...2

**ಅಭ್ಯರ್ಥಿಗಳಿಗೆ ಸೂಚನೆಗಳು :**

1. ಅತಿಥಿ ಉಪನ್ಯಾಸಕರನ್ನು ಯುಜಿಸಿ ಹಾಗೂ ಕಾಲಕಾಲಕ್ಕೆ ಹೊರಡಿಸುವ ಸರಕಾರಿ ನಿಯಮಾವಳಿಯ ಪ್ರಕಾರ ನೇಮಕ ಮಾಡಲಾಗುವುದು.
2. ಈ ಹುದ್ದೆಗಳು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 2025–26ನೇ ಶೈಕ್ಷಣಿಕ ಸಾಲಿಗೆ ಮಾತ್ರ ಸೀಮಿತವಾಗಿರುತ್ತದೆ ಹಾಗೂ ಯಾವುದೇ ಮಂಜೂರಾದ ಹುದ್ದೆಗಳಿಗೆ ವಿರುದ್ಧವಾಗಿರುವುದಿಲ್ಲ ಮತ್ತು ಸೂಚಿಸಲಾದ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ನೇಮಿಸಿಕೊಳ್ಳಲಾಗುವುದು (Against the workload but not against the sanctioned post).
3. ಅಧಿಸೂಚನೆಯಲ್ಲಿ ಪ್ರಕಟಿಸಿದ ಹುದ್ದೆಗಳನ್ನು ಭರ್ತಿ ಮಾಡುವ ಅಥವಾ ಭರ್ತಿ ಮಾಡದೇ ಇರುವ ಅಧಿಕಾರವನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿದೆ.
4. ಆಯ್ಕೆಯಾದ ಅಭ್ಯರ್ಥಿಗಳ ಸೇವೆಯು ತೃಪ್ತಿಕರವಾಗಿರದಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಕೆಲಸದಿಂದ ವಜಾ ಮಾಡುವ ಅಧಿಕಾರ ವಿಶ್ವವಿದ್ಯಾನಿಲಯ ಹೊಂದಿದೆ.
5. ಸಂದರ್ಶನಕ್ಕೆ ಹಾಜರಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಯೆಂದು ಭಾವಿಸತಕ್ಕದ್ದಲ್ಲ.
6. ನಿಗದಿತ ಅರ್ಜಿ ನಮೂನೆಗಳು, ವಿವಿಧ ವಿಭಾಗಗಳ ವಿವರ ಹಾಗೂ ಇನ್ನಿತರೆ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ಅಂತರ್ಜಾಲ https://raichuruniversity.ac.in ನೋಡತಕ್ಕದ್ದು ಹಾಗೂ ಅರ್ಜಿಗಳನ್ನು ಡೌನ್‌ಲೋಡ್ ಮಾಡತಕ್ಕದ್ದು. ಭರ್ತಿ ಮಾಡಿದ ಅರ್ಜಿ, ಜಾತಿ ಪ್ರಮಾಣ ಪತ್ರ ಮತ್ತು ಸಂಬಂಧಿಸಿದ ದಾಖಲೆಗಳ ಸ್ವ–ದೃಢೀಕೃತ ಪ್ರತಿಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
7. ಸಂದರ್ಶನದ ವೇಳೆಯಲ್ಲಿ ಅಭ್ಯರ್ಥಿಗಳು ತಮ್ಮ ಎಲ್ಲಾ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.
8. **ಪ.ಜಾ/ಪ.ಪಂ., ಪ್ರವರ್ಗ–1 ಅಭ್ಯರ್ಥಿಗಳಿಗೆ ರೂ. 750=00 ಸಾಮಾನ್ಯ ಹಾಗೂ ಇತರೆ ಅಭ್ಯರ್ಥಿಗಳಿಗೆ ರೂ. 1500=00 ಅರ್ಜಿ ಶುಲ್ಕ ನಿಗದಿಪಡಿಸಲಾಗಿದೆ. ಸದರಿ ಅಭ್ಯರ್ಥಿಗಳು ತಮ್ಮ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸಿದ್ದಲ್ಲಿ ಮಾತ್ರ ಮೀಸಲಾತಿಗೆ ಅರ್ಹರಿರುತ್ತಾರೆ.**
9. ಭರ್ತಿ ಮಾಡಿದ ಅರ್ಜಿಯೊಂದಿಗೆ ನಿಗದಿತ ಶುಲ್ಕವನ್ನು ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣದಲ್ಲಿಯ ಆನಲೈನ್ ಪೇಮೆಂಟ್ ಲಿಂಕ್ ಮುಖಾಂತರ ಭರಿಸಿ ಪ್ರತಿಯನ್ನು ಲಗತ್ತಿಸಬೇಕು ಅಥವಾ ವಿಶ್ವವಿದ್ಯಾನಿಲಯದ ಯೂನಿಯನ್ ಬ್ಯಾಂಕ್ ಖಾತೆ ಸಂ: **049112010000093** ಗೆ (IFSC Code : **UBIN0804916**) ಹಣವನ್ನು ಪಾವತಿಸಿ ರಸೀದಿಯ ಪ್ರತಿಯನ್ನು ಲಗತ್ತಿಸತಕ್ಕದ್ದು.
10. ಸಂದರ್ಶನ ದಿನಾಂಕ ಮತ್ತು ಸಮಯವನ್ನು ಹಾಗೂ ಇದಕ್ಕೆ ಸಂಬಂಧಿಸಿದ ಇನ್ನಿತರೆ ಮಾಹಿತಿಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ https://raichuruniversity.ac.in ಪ್ರಕಟಿಸಲಾಗುವುದು. ಅಭ್ಯಥಿಗಳ ವಿಶ್ವವಿದ್ಯಾನಿಲಯದ ವೆಬ್‌ಸೈಟ್ ಗಮನಿಸಲು ತಿಳಿಸಲಾಗಿದೆ. ಸಂದರ್ಶನಕ್ಕಾಗಿ ವಿಶ್ವವಿದ್ಯಾನಿಲಯದಿಂದ ಯಾವುದೇ ಭತ್ಯೆಗಳನ್ನು ನೀಡಲಾಗುವುದಿಲ್ಲ.
11. ಮೇಲ್ಕಂಡ ಎಲ್ಲಾ ದಾಖಲೆಗಳನ್ನು ದಿನಾಂಕ: 20.09.2025 ರೊಳಗಾಗಿ ಸಂಬಂಧಿಸಿದ ವಿಭಾಗಗಳ ಮುಖ್ಯಸ್ಥರು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ, ಕೃಷ್ಣತುಂಗ ಆವರಣ, ಮಂತ್ರಾಲಯ ರಸ್ತೆ, ಯರಗೇರಾ 584133, ರಾಯಚೂರು ಕರ್ನಾಟಕ, ಇವರಿಗೆ ಖುದ್ದಾಗಿ/ರಿಜಿಸ್ಟರ್ ಅಂಚೆ ಮುಖಾಂತರ ಸಲ್ಲಿಸತಕ್ಕದ್ದು **(ಕೋರಿಯರ್ ಸರ್ವಿಸ್ ಇರುವುದಿಲ್ಲ).**
12. ಅಂಚೆ ಸೇವೆಯಲ್ಲಿ ವಿಳಂಬವಾದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
13. ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
14. ಆಯ್ಕೆ ಪ್ರಕ್ರಿಯೆಯು ಪ್ರಸ್ತುತ ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿಗಳನ್ವಯ ಅರ್ಹತೆ (ಮೆರಿಟ್) ಹಾಗೂ ಮೀಸಲಾತಿ ಆಧಾರವನ್ನು ಪರಿಗಣಿಸಿಲಾಗುವುದು.
15. ಸಂದರ್ಶನದ ವೇಳೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಸಲ್ಲಿಸಿರುವ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ತಾತ್ಕಾಲಿಕ ಆದೇಶ ಪತ್ರ ನೀಡಲಾಗುವುದು.
16. ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ವಿಭಾಗದ ಮುಖ್ಯಸ್ಥರು ನೀಡುವ ಬೋಧನಾ ಕಾರ್ಯದ ಜೊತೆಗೆ ಇತರೇ ಕಚೇರಿ ಕೆಲಸಗಳನ್ನು ನಿಷ್ಠೆಯಿಂದ ಪಾಲಿಸಬೇಕು.
17. ವಿಶ್ವವಿದ್ಯಾನಿಲಯವು ನಡೆಸುವ ತಾತ್ಕಾಲಿಕ ಅತಿಥಿ ಉಪನ್ಯಾಸಕರ ನೇಮಕದ ಸಂದರ್ಶನವು ವಿಶ್ವವಿದ್ಯಾನಿಲಯದ ವಿವೇಚನೆಗೆ ಒಳಪಟ್ಟಿರುತ್ತದೆ.
18. ಅತಿಥಿ ಉಪನ್ಯಾಸಕರ ಕಾರ್ಯಭಾರವನ್ನು ಬದಲಾಯಿಸುವ ಅಧಿಕಾರ ವಿಶ್ವವಿದ್ಯಾನಿಲಯದ ವಿವೇಚನೆಗೆ ಒಳಪಟ್ಟಿರುತ್ತದೆ.
19. ಆಯ್ಕೆಯಾದ ಅತಿಥಿ ಉಪನ್ಯಾಸಕರಿಗೆ ಸಂಭಾವನೆ/ಗೌರವಧನ ಅರ್ಹತೆಗೆ ತಕ್ಕಂತೆ ನಿಗದಿಪಡಿಸಲಾಗುವುದು.
20. ಪೂರ್ಣಕಾಲಿಕ ಅತಿಥಿ ಉಪನ್ಯಾಸಕರು ಕಚೇರಿಯ ಕೆಲಸದ ಅವಧಿಯಲ್ಲಿ ಕಡ್ಡಾಯವಾಗಿ ವಿಶ್ವವಿದ್ಯಾನಿಲಯದಲ್ಲಿ ಹಾಜರಿರತಕ್ಕದ್ದು.

ಕುಲಸಚಿವರು

ಕುಲಸಚಿವರು
ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ
ರಾಯಚೂರು.

ಪ್ರತಿಗಳು;

1. ಎಲ್ಲಾ ವಿಭಾಗದ ಮುಖ್ಯಸ್ಥರುಗಳು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ, ರಾಯಚೂರು.
2. ಹಣಕಾಸು ಅಧಿಕಾರಿಗಳು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ, ರಾಯಚೂರು.
3. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ, ರಾಯಚೂರು.
4. ಕುಲಪತಿಗಳ ಆಪ್ತ ಕಾರ್ಯದರ್ಶಿ/ಕುಲಸಚಿವರ ಆಪ್ತ ಸಹಾಯಕರು, ಆಶ್ರೀಮವಾವಿ ರಾಯಚೂರು.
5. ಕೋ–ಆರ್ಡಿನೇಟರ್, ಕಂಪ್ಯೂಟರ್ ಸೆಂಟರ್ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
6. ಕಚೇರಿ ಪ್ರತಿ.